# ಕುವೆಂಪು ವಿಶ್ವವಿದ್ಯಾಲಯ

ಕುಲಸಚಿವರು

ವಿಶ್ವವಿದ್ಯಾಲಯ ಕಾರ್ಯಾಲಯ
ಜ್ಞಾನ ಸಹ್ಯಾದ್ರಿ, ಶಂಕರಘಟ್ಟ - 577451
ಶಿವಮೊಗ್ಗ ಜಿಲ್ಲೆ, ಕರ್ನಾಟಕ

ಸಂಖ್ಯೆ: ಕುವಿ/ಪ.ಜಾ:ಪ.ಪಂ.ಘ-2/138 / 2024-25/ ದಿನಾಂಕ: 14-10-2024 18

## ಪ್ರಕಟಣೆ

**ವಿಷಯ: ಅಂತಿಮ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ: ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಶೈಕ್ಷಣಿಕ ಪ್ರವಾಸ ಕೈಗೊಳ್ಳಲು ಪ್ರೋತ್ಸಾಹಧನಕ್ಕಾಗಿ ಅರ್ಜಿಯನ್ನು ಸಲ್ಲಿಸುವ ಕುರಿತು.**

*****

2023-24ನೇ ಶೈಕ್ಷಣಿಕ ಸಾಲಿನಲ್ಲಿ ವಿಶ್ವವಿದ್ಯಾಲಯದ ಆವರಣ, ಸ್ನಾತಕೋತ್ತರ ಕೇಂದ್ರ ಹಾಗೂ ಘಟಕ ಕಾಲೇಜಿನ ವಿವಿಧ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಂತಿಮ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರುವ ಹಾಗೂ ಪೋಷಕರ ಆದಾಯ ರೂ. 2.50 ಲಕ್ಷಗಳ ಮಿತಿಯೊಳಗಿದ್ದು, ವಿದ್ಯಾರ್ಥಿವೇತನಕ್ಕೆ ಅರ್ಹರಿರುವ ಪರಿಶಿಷ್ಟ ಜಾತಿ: ಪರಿಶಿಷ್ಟ ಪಂಗಡಕ್ಕೆ ಸೇರಿದ ವಿದ್ಯಾರ್ಥಿಗಳು ತಮ್ಮ ಅಧ್ಯಯನಕ್ಕೆ ಪೂರಕವಾದ ಶೈಕ್ಷಣಿಕ ಪ್ರವಾಸ (Study / Educational Tour) ಕೈಗೊಳ್ಳಲು ಪ್ರತಿ ವಿದ್ಯಾರ್ಥಿಗೆ ತಲಾ **ರೂ.1,000/-** ಗಳ (ರೂಪಾಯಿ **ಒಂದು ಸಾವಿರ** ಮಾತ್ರ) ಪ್ರೋತ್ಸಾಹ ಧನವನ್ನು ನೀಡಲಾಗುವುದು.

ಆದ್ದರಿಂದ, ಸದರಿ ಸಹಾಯಧನವನ್ನು ಪಡೆಯಲು ಬಯಸುವ ವಿಭಾಗದ ವಿದ್ಯಾರ್ಥಿಗಳು ಶೈಕ್ಷಣಿಕ ಪ್ರವಾಸ ಕೈಗೊಂಡಿರುವ ಕುರಿತು **ಶೈಕ್ಷಣಿಕ ವಿಭಾಗದಿಂದ ಪ್ರವಾಸಕ್ಕೆ ಅನುಮತಿ ಪಡೆದಿದ್ದಲ್ಲಿ ಮಾತ್ರ ಅರ್ಜಿ ಸಲ್ಲಿಸುವುದು.** ನಿಗದಿತ ಅರ್ಜಿಯನ್ನು ಆನ್ ಲೈನ್ ಮೂಲಕ Google Format ನಲ್ಲಿ ಆಹ್ವಾನಿಸಲಾಗಿದೆ. ಅರ್ಹ ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳು ಅರ್ಜಿಯನ್ನು ವಿಶ್ವವಿದ್ಯಾನಿಲಯದ ಅಂತರ್ಜಾಲ ವಿಳಾಸ :- http://www.kuvempu.ac.in

↓

*SC/ST downloads* ರಲ್ಲಿ

↓

**Google Format** ನ ಮೂಲಕ

**Google Format Link :** https://forms.gle/Ts7QUHjHqMUjvHsH7

ಅರ್ಜಿಗಳನ್ನು ಆನ್ ಲೈನ್ ಮೂಲಕವೇ ಭರ್ತಿ ಮಾಡಿ **ದಿನಾಂಕ: 21-10-2024** ರೊಳಗಾಗಿ ***Submit*** ಮಾಡಲು ತಿಳಿಸಲಾಗಿದೆ. ನಿಗದಿತ ದಿನಾಂಕದ ನಂತರ ಸಲ್ಲಿಸುವ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಸ್ವೀಕರಿಸಲಾಗುವುದಿಲ್ಲ/ ಪರಿಗಣಿಸಲಾಗುವುದಿಲ್ಲ.

ಭರ್ತಿ ಮಾಡಲಾದ ಅರ್ಜಿ ನಮೂನೆಯನ್ನು ಅಗತ್ಯ ದಾಖಲಾತಿಗಳೊಂದಿಗೆ ಆಯಾ ವಿಭಾಗಕ್ಕೆ ಸಲ್ಲಿಸುವುದು. ಆಯಾ ವಿಭಾಗದ ಮುಖ್ಯಸ್ಥರು ಸ್ವೀಕೃತವಾದ ಅರ್ಜಿಗಳನ್ನು ಕ್ರೋಢೀಕರಿಸಿ, ಶೈಕ್ಷಣಿಕ ಪ್ರವಾಸ ಕೈಗೊಂಡಿರುವ ಬಗ್ಗೆ ದೃಢೀಕರಣ ಹಾಗೂ ಶೈಕ್ಷಣಿಕ ವಿಭಾಗದ ಅನುಮತಿ ಪತ್ರದೊಂದಿಗೆ ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ಘಟಕದ ಕಛೇರಿಗೆ **ದಿನಾಂಕ: 24-10-2024** ರೊಳಗಾಗಿ ಕಳುಹಿಸುವುದು.

ಕರಡು ಕುಲಸಚಿವರಿಂದ
ಅನುಮೋದನೆಯಾಗಿದೆ.

ಸಂಚಾಲಕರು

ಸಂಚಾಲಕರು
ಪರಿಶಿಷ್ಟಜಾತಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ಘಟಕ
ಕುವೆಂಪು ವಿಶ್ವವಿದ್ಯಾಲಯ
ಜ್ಞಾನಸಹ್ಯಾದ್ರಿ, ಶಂಕರಘಟ್ಟ - 577 451.
ಶಿವಮೊಗ್ಗ ಜಿಲ್ಲೆ.

ಗೆ,

1) ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರು, ಕುವೆಂಪು ವಿಶ್ವವಿದ್ಯಾಲಯ, ಜ್ಞಾನಸಹ್ಯಾದ್ರಿ, ಶಂಕರಘಟ್ಟ
2) ಪ್ರಾಂಶುಪಾಲರು, ಸಹ್ಯಾದ್ರಿ ವಿಜ್ಞಾನ, ಕಲಾ ಹಾಗೂ ವಾಣಿಜ್ಯ ಕಾಲೇಜು, ಶಿವಮೊಗ್ಗ
3) ವಿಭಾಗದ ಮುಖ್ಯಸ್ಥರು, ಸ್ನಾತಕೋತ್ತರ ಕೇಂದ್ರ, ಕಡೂರು ಹಾಗೂ ಚಿಕ್ಕಮಗಳೂರು.

ಪ್ರತಿಗಳು:

1) ಮಾನ್ಯ ಕುಲಪತಿಗಳು/ಕುಲಸಚಿವರು/ಹಣಕಾಸು ಅಧಿಕಾರಿಗಳ ಆಪ್ತಕಾರ್ಯಾಲಯ, ಕುವೆಂಪು ವಿಶ್ವವಿದ್ಯಾಲಯ, ಜ್ಞಾನಸಹ್ಯಾದ್ರಿ, ಶಂಕರಘಟ್ಟ.
2) ಕಛೇರಿ ಪ್ರತಿ/ಹುಂಡಿ ಪ್ರತಿ.